ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ
1951ರ ರಾಜ್ಯ ಹಣಕಾಸು ಸಂಸ್ಥೆಗಳ ಕಾಯಿದೆ ಅನ್ವಯ ಸ್ಥಾಪಿತ
KARNATAKA STATE FINANCIAL CORPORATION
Established under the State Financial Corporations' Act, 1951

ಸಂಖ್ಯೆ : ಕ.ರಾ.ಹ.ಸಂ./ಪ್ರ.ಕ./ Secy/1021/2021-22/2-713
Ref. No. KSFC/H.O./

ದಿನಾಂಕ
Date : 03/02/2022

**ಸುತ್ತೋಲೆ- 03**

ವಿಷಯ : ಕೋವಿಡ್–19 (3ನೇ ಅಲೆ) ಸಂಬಂಧದಲ್ಲಿ ಸಾಂಕ್ರಾಂಮಿಕ ರೋಗಕ್ಕೆ ಒಳಪಟ್ಟಿರುವ ನೌಕರರಿಗೆ ವಿಶೇಷ ಸಾಂದರ್ಭಿಕ ರಜೆ ಮಂಜೂರಾತಿ ಕುರಿತಂತೆ.

---

- ಸಂಸ್ಥೆಯ ಉದ್ಯೋಗಿಗಳು 3ನೇ ಅಲೆಯ ಸಾಂಕ್ರಾಂಮಿಕ ರೋಗದಿಂದ ಸೋಂಕಿತರಾಗಿದ್ದಲ್ಲಿ ಸಂದರ್ಭಾನುಸಾರ ವಿಶೇಷ ಸಾಂದರ್ಭಿಕ ರಜೆಯನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರವು ಈ ಕೆಳಕಂಡ ಸಂದರ್ಭದಲ್ಲಿ ಮಂಜೂರು ಮಾಡಬಹುದಾಗಿದೆ.

  1. ಸಂಸ್ಥೆಯ ನೌಕರ ಅಥವಾ ಆತನ ಕುಟುಂಬದ ಸದಸ್ಯರು ಕೋವಿಡ್–19 ಸಾಂಕ್ರಾಮಿಕ ರೋಗಕ್ಕೆ ಒಳಪಟ್ಟ ಸಂದರ್ಭದಲ್ಲಿ ಹಾಗೂ ನೌಕರನು ವಾಸಿಸುವ ಪ್ರದೇಶವನ್ನು ಕಂಟೇನ್ಮೆಂಟ್ ಪ್ರದೇಶವೆಂದು ಘೋಷಿಸಿ ಸಾರ್ವಜನಿಕ ಸಂಚಾರದಲ್ಲಿ ಯಾವುದೇ ನಿರ್ಬಂಧ ವಿಧಿಸಿದ್ದಲ್ಲಿ ಅಂತಹ ನೌಕರನಿಗೆ ಗರಿಷ್ಠ 07 ದಿನಗಳ (ಏಳು ದಿನಗಳು) ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಬಹುದು.
  2. ಸದರಿ ರಜೆಯ ಮೇಲಿರುವ ನೌಕರನು ಕಚೇರಿಯ ತುರ್ತು ಕೆಲಸಗಳ ನಿರ್ವಹಣೆಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವು ದೂರವಾಣಿ, ಆನ್ಲೈನ್ ಮೂಲಕ ನೀಡುವ ಸೂಚನೆಗಳನ್ನು ಪಾಲಿಸುವುದಕ್ಕೆ ಬದ್ಧನಾಗಿರತಕ್ಕದ್ದು.

ಈ ವಿಶೇಷ ಸಾಂದರ್ಭಿಕ ರಜೆಯನ್ನು ಬಿಬಿಎಂಪಿ ಅಥವಾ ಸ್ಥಳೀಯ ಸಕ್ಷಮ ಆಡಳಿತ ಕಛೇರಿ / ವೈದ್ಯಾಧಿಕಾರಿಗಳಿಂದ ಪಡೆದ ಸೂಕ್ತ ದಾಖಲಾತಿಗಳನ್ನು ಒದಗಿಸಿದ ನಂತರವೇ ಪರಿಗಣಿಸಲಾಗುವುದು.

03/02/22
ಕಾರ್ಯ ನಿರ್ವಾಹಕ ನಿರ್ದೇಶಕರು-1

ಗೆ,

ಎಲ್ಲಾ ಶಾಖಾ ಕಛೇರಿಗಳ ಮುಖ್ಯಸ್ಥರುಗಳಿಗೆ,
ಪ್ರಧಾನ ಕಛೇರಿಯ ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳಿಗೆ
ಆಲೆಪ ಕೋಶ, ಮೈಸೂರು, ಧಾರವಾಡ, ಗುಲ್ಬರ್ಗಾ, ಬೆಂಗಳೂರು
ಎಲ್ಲಾ ಪ್ರಧಾನ ವ್ಯವಸ್ಥಾಪಕರುಗಳಿಗೆ,

ಕಾರ್ಯ ನಿರ್ವಾಹಕ ನಿರ್ದೇಶಕರು– 2

ವ್ಯ.ನಿ. ರವರ ಕಛೇರಿಗೆ – ಮಾಹಿತಿಗಾಗಿ.
ಗ್ರಂಥಾಲಯ / ಸೂಚನಾ ಫಲಕಕ್ಕೆ